ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 : ದಿನಾಂಕ : 18–01–2020

# ಪತ್ರಿಕಾ ಆಮಂತ್ರಣ

1. ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮಕ್ಕೆ ಚಾಲನೆ :

ಬಿ. ಶ್ರೀರಾಮುಲು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ದಿನಾಂಕ: 19–01–2020, ಭಾನುವಾರ, ಸಮಯ : ಬೆಳಿಗ್ಗೆ 6–00 ಗಂಟೆಗೆ
ಸ್ಥಳ : ಪ್ರಾಥಮಿಕ ಆರೋಗ್ಯ ಕೇಂದ್ರ, ಚಿಕ್ಕಜಾಲ, ಬೆಂಗಳೂರು

2. ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಶ್ರೀ ಮಹಾಯೋಗಿ ವೇಮನ ಜಯಂತಿ.

ಸಾನಿಧ್ಯ:
ಶ್ರೀ ವೇಮಾನಂದದ ಮಹಾಸ್ವಾಮೀಜಿ
ರೆಡ್ಡಿ ಗುರುಪೀಠ ಎರೆಹೊಸಹಳ್ಳಿ, ಹರಿಹರ, ದಾವಣಗೆರೆ ಜಿಲ್ಲೆ

ಉದ್ಘಾಟನೆ:
ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಘನ ಉಪಸ್ಥಿತಿ:

ಡಿ.ವಿ. ಸದಾನಂದಗೌಡ, ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು. ಭಾರತ ಸರ್ಕಾರ

ಶ್ರೀಮತಿ ನಿರ್ಮಲಾ ಸೀತಾರಾಮನ್, ಹಣಕಾಸು ಸಚಿವರು, ಭಾರತ ಸರ್ಕಾರ

ಮುಖ್ಯ ಅತಿಥಿಗಳು:
ಗೋವಿಂದ ಎಂ. ಕಾರಜೋಳ, ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು.

ಡಾ ಸಿ.ಎನ್. ಅಶ್ವತ್ಥ್ ನಾರಾಯಣ್, ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ ಹಾಗೂ ವಿಜ್ಞಾನ–ತಂತ್ರಜ್ಞಾನ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು.

ಲಕ್ಷ್ಮಣ್ ಸಂಗಪ್ಪ ಸವದಿ, ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಮತ್ತು ಕೃಷಿ ಸಚಿವರು.

ದಿನಾಂಕ: 19–01–2020, ಭಾನುವಾರ, ಸಮಯ: ಸಂಜೆ 5.30 ಗಂಟೆಗೆ

ಸ್ಥಳ: ರವೀಂದ್ರ ಕಲಾಕ್ಷೇತ್ರ, ಕನ್ನಡ ಭವನ, ಜೆ. ಸಿ. ರಸ್ತೆ, ಬೆಂಗಳೂರು.

3. ತೋಟಗಾರಿಕೆ ಮತ್ತು ರೇಷ್ಮೆ ಸಚಿವ ವಿ. ಸೋಮಣ್ಣ ಅವರಿಂದ ನಗರದ ಕಬ್ಬನ್ ಪಾರ್ಕ್ ಉದ್ಯಾನವನಕ್ಕೆ ಭೇಟಿ – ವಾಯು ವಿಹಾರಕ್ಕೆ ಆಗಮಿಸುವ ನಾಗರಿಕರೊಡನೆ ಸಂವಾದ ಕಾರ್ಯಕ್ರಮ:

   ದಿನಾಂಕ: 20–01–2020, ಸೋಮವಾರ, ಸಮಯ: ಬೆಳಿಗ್ಗೆ 6.00 ಗಂಟೆ

   ಸ್ಥಳ: ಕಬ್ಬನ್ ಉದ್ಯಾನವನ, ಬೆಂಗಳೂರು.

4. ನವದೆಹಲಿಯ ತಲ್ಕಾಟೋರಾ ಸ್ಟೇಡಿಯಂನಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ರಾಷ್ಟ್ರದ ವಿದ್ಯಾರ್ಥಿಗಳೊಂದಿಗೆ ನಡೆಸಿಕೊಡುವ ನೇರ ಸಂವಾದ 'ಪರೀಕ್ಷಾ ಪೇ ಚರ್ಚಾ 2020' ಕಾರ್ಯಕ್ರಮದ ನೇರ ಪ್ರಸಾರದ ವೀಕ್ಷಣೆ.

   <u>ಪಾಲ್ಗೊಳ್ಳುವಿಕೆ:</u>
   ಎಸ್. ಸುರೇಶ್ ಕುಮಾರ್, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು.

   ದಿನಾಂಕ: 20–01–2020, ಸೋಮವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ
   ಸ್ಥಳ: ಕೆಎಲ್ಇ ಇಂಟರ್‌ನ್ಯಾಷನಲ್ ಸ್ಕೂಲ್, ರಾಜಾಜಿನಗರ, ಬೆಂಗಳೂರು.

5. <u>ಪತ್ರಿಕಾಗೋಷ್ಠಿ:</u>
   (ಎಸ್‌ಎಸ್‌ಎಲ್‌ಸಿ ಪರೀಕ್ಷಾ ಸಿದ್ದತೆ ಪರಿಶೀಲನಾ ಸಭೆಯ ನಂತರ)

   ಎಸ್. ಸುರೇಶ್ ಕುಮಾರ್, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು.

   ದಿನಾಂಕ: 20–01–2020, ಸೋಮವಾರ, ಸಮಯ: ಮಧ್ಯಾಹ್ನ 3.15 ಗಂಟೆಗೆ
   ಸ್ಥಳ: ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ ಸರ್ಕಲ್ ಬಳಿ, ಬೆಂಗಳೂರು.

6. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸುಗ್ಗಿ – ಹುಗ್ಗಿ ಸಂಕ್ರಾಂತಿ ಸಂಭ್ರಮ.

ಉದ್ಘಾಟನೆ:
ಸಿ. ಟಿ. ರವಿ, ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಕ್ಕರೆ ಸಚಿವರು.

ಘನ ಉಪಸ್ಥಿತಿ:
ಡಿ.ವಿ. ಸದಾನಂದಗೌಡ, ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು. ಭಾರತ ಸರ್ಕಾರ

ಶ್ರೀಮತಿ ನಿರ್ಮಲಾ ಸೀತಾರಾಮನ್, ಹಣಕಾಸು ಸಚಿವರು, ಭಾರತ ಸರ್ಕಾರ

ಮುಖ್ಯ ಅತಿಥಿಗಳು:
ಗೋವಿಂದ ಎಂ. ಕಾರಜೋಳ, ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಕಲ್ಯಾಣ ಸಚಿವರು.

ಡಾ ಸಿ.ಎನ್. ಅಶ್ವತ್ಥ್ ನಾರಾಯಣ್, ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ ಹಾಗೂ ವಿಜ್ಞಾನ–ತಂತ್ರಜ್ಞಾನ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು.

ಲಕ್ಷ್ಮಣ್ ಸಂಗಪ್ಪ ಸವದಿ, ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಮತ್ತು ಕೃಷಿ ಸಚಿವರು.

ದಿನಾಂಕ: 20–01–2020, ಸೋಮವಾರ, ಸಮಯ: ಸಂಜೆ 5.00 ಗಂಟೆಗೆ

ಸ್ಥಳ: ಕಲಾಗ್ರಾಮದ ಸುವರ್ಣ ಸಾಂಸ್ಕೃತಿಕ ಸಮುಚ್ಛಯದ ಆವರಣ, ಮಲ್ಲತ್ತಹಳ್ಳಿ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

### ರಾಜ್ಯದ ಒಂದು ಜಿಲ್ಲಾ ಪಂಚಾಯತಿ ಮತ್ತು ಎಂಟು ತಾಲ್ಲೂಕು ಪಂಚಾಯತಿಗಳಲ್ಲಿ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಉಪಚುನಾವಣೆ

ಬೆಂಗಳೂರು ಜನವರಿ 18 (ಕರ್ನಾಟಕ ವಾರ್ತೆ)

ರಾಜ್ಯದ ಒಂದು ಜಿಲ್ಲಾ ಪಂಚಾಯತಿ ಮತ್ತು ಎಂಟು ತಾಲ್ಲೂಕು ಪಂಚಾಯತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ಹನ್ನೊಂದು ಸದಸ್ಯ ಸ್ಥಾನಗಳಿಗೆ ಉಪಚುನಾವಣೆಯನ್ನು ನಡೆಸಲು ಆಯೋಗವು ಕೆಳಕಂಡಂತೆ ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿದೆ. ಉಪಚುನಾವಣೆ ನಡೆಯುವ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ಕ್ಷೇತ್ರಗಳ ವ್ಯಾಪ್ತಿಯಲ್ಲಿ ದಿನಾಂಕ 25–01–2020 ರಿಂದ ದಿನಾಂಕ: 11–02–2020 ರವರೆಗೆ ಚುನಾವಣಾ ನೀತಿ ಸಂಹಿತೆಯು ಜಾರಿಯಲ್ಲಿರುತ್ತದೆ.

ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ 25-01-2020 (ಶನಿವಾರ), ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ 28-01-2020 (ಮಂಗಳವಾರ), ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ 29-01-2020 (ಬುಧವಾರ), ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ 31-01-2020 (ಶುಕ್ರವಾರ), ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ), 09-02-2020 (ಭಾನುವಾರ), ಮರು ಮತದಾನ ಅವಶ್ಯವಿದ್ದಲ್ಲಿ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ) 10-02-2020 (ಸೋಮವಾರ). ಮತಗಳ ಎಣಿಕೆ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ ತಾಲ್ಲೂಕು ಕೇಂದ್ರಗಳಲ್ಲಿ) 11-02-2020 (ಮಂಗಳವಾರ). ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೊ ಆ ದಿನಾಂಕ ಮತ್ತು ದಿನ 11-02-2020 (ಮಂಗಳವಾರ).

ಜಿಲ್ಲಾ ಪಂಚಾಯತ್‌ಗೆ ಉಪಚುನಾವಣೆ : ಬೆಳಗಾವಿಯ ಹುಕ್ಕೇರಿ ತಾಲ್ಲೂಕಿನ 59- ಹೆಬ್ಬಾಳ.
ತಾಲ್ಲೂಕು ಪಂಚಾಯತ್‌ಗೆ ಉಪ ಚುನಾವಣೆ:

ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ಉತ್ತರ ತಾಲ್ಲೂಕಿನ 02- ಮಾಚೋಹಳ್ಳಿ, ರಾಮನಗರ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ 11-ಮತ್ತಿಕೆರೆ, ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ 06-ಜಕ್ಕೂರು, ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ 11-ಕುರುಬೂರು, ಗೌರಿಬಿದನೂರು ತಾಲ್ಲೂಕಿನ 01-ಅಲಕಾಪುರ, 07- ಗಂಗಸಂದ್ರ, 22-ಶ್ಯಾಂಪುರ. ಬೆಳಗಾವಿ ಜಿಲ್ಲೆಯ ರಾಮದುರ್ಗ ತಾಲ್ಲೂಕಿನ 11-ಕಟಕೋಳ, ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ 09-ತಿಳವಳ್ಳಿ, ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲ್ಲೂಕಿನ 10-ಕರೂರು.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.karsec.gov.in ನಲ್ಲಿ ಪಡೆಯಬಹುದಾಗಿರುತ್ತದೆ ಎಂದು ಕರ್ನಾಟಕ ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.

## ಗಣರಾಜ್ಯೋತ್ಸವ ಅಂಗವಾಗಿ ಬಾಲಭವನದಲ್ಲಿ ಮಕ್ಕಳಿಗೆ ವಿವಿಧ ಸ್ಪರ್ಧೆ

ಬೆಂಗಳೂರು ಜನವರಿ 18 (ಕರ್ನಾಟಕ ವಾರ್ತೆ)

ಬಾಲ ಭವನವು ಗಣರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ, ದಿನಾಂಕ: 26-01-2020 ರಂದು ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಕೇಂದ್ರ ಬಾಲ ಭವನ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಹಮ್ಮಿಕೊಂಡಿದೆ.

ಅಂದು ಬೆಳಿಗ್ಗೆ 10.30 ಗಂಟೆಗೆ 5 ರಿಂದ 8 ವರ್ಷದ ಮಕ್ಕಳಿಗೆ ವೇಷ ಭೂಷಣ ಸ್ಪರ್ಧೆ. ವಿಷಯ: ರಾಷ್ಟ್ರೀಯ ನಾಯಕರ ಅಥವಾ ಸ್ವಾತಂತ್ರ್ಯ ಹೋರಾಟಗಾರರ ವೇಷಭೂಷಣ ಧರಿಸಿ ಬರುವುದು.

ಬೆಳಿಗ್ಗೆ 11.00 ಗಂಟೆಗೆ 5 ರಿಂದ 16 ವರ್ಷದ ಮಕ್ಕಳಿಗೆ ಸ್ಥಳದಲ್ಲೇ ಚಿತ್ರ ಬಿಡಿಸುವ ಕಲಾಸ್ಪರ್ಧೆ – ಹಾಳೆಗಳನ್ನು ಮಾತ್ರ ನೀಡಲಾಗುವುದು. ಉಳಿದ ಸಾಮಾಗ್ರಿಗಳನ್ನು ಮಕ್ಕಳೇ ತರತಕ್ಕದ್ದು.

ಮಧ್ಯಾಹ್ನ 2.30 ಗಂಟೆಗೆ ಶಿಬಿರದ ಸಮಾರೋಪ ಸಮಾರಂಭ ಹಾಗೂ ಸಂಜೆ 3–00 ಗಂಟೆಗೆ ಭಾಗವಹಿಸಿದ ಎಲ್ಲಾ ಮಕ್ಕಳಿಗೆ ಪ್ರಮಾಣ ಪತ್ರ ವಿತರಣೆ ಹಾಗೂ ವಿಜೇತರಿಗೆ ಬಹುಮಾನ ವಿತರಣಾ ಸಮಾರಂಭ.

ಸ್ಪರ್ಧೆಗಳಲ್ಲಿ ಭಾಗವಹಿಸುವ ಆಸಕ್ತ ಮಕ್ಕಳು ಜನವರಿ 24 ರ ಒಳಗೆ ವಿವರಗಳನ್ನು ಕಚೇರಿ ವೇಳೆಯಲ್ಲಿ ನೋಂದಾಯಿಸಬಹುದಾಗಿದೆ (ರಜಾ ದಿನಗಳನ್ನು ಹೊರತುಪಡಿಸಿ)

ಹೆಚ್ಚಿನ ವಿವರಗಳಿಗೆ ಹಾಗೂ ನೋಂದಣಿಗಾಗಿ ಕಾರ್ಯದರ್ಶಿಗಳ ಕಚೇರಿ, ಬಾಲ ಭವನ ಸೊಸೈಟಿ, ಕಬ್ಬನ್ ಪಾರ್ಕ್, ಬೆಂಗಳೂರು ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080–22864189 ರ ಮೂಲಕ ಸಂಪರ್ಕಿಸಬಹುದಾಗಿದೆ. **Email:-secybalbhavan.bng@gmail.com**

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು ಜನವರಿ 18 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 19–01–2020** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಶ್ರೀ ಮನೋಜ್ ದುಪಟಿ ಮತ್ತು ತಂಡದವರಿಂದ ನೃತ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ **ಬಾಲಭವನ ಸೊಸೈಟಿ** ಸಹಯೋಗದೊಂದಿಗೆ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯ **ಇಂದಿರಾನಗರ ಸಂಗೀತ ಸಭೆ (ರಿ) ತಂಡದವರಿಂದ ಕರ್ನಾಟಕ ಮತ್ತು ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## ಬ್ಯಾಕ್‌ಲಾಗ್ ಹುದ್ದೆಗಳ ತ್ವರಿತ ನೇಮಕಾತಿ ಗೋವಿಂದ ಕಾರಜೋಳ

ಬೆಂಗಳೂರು. ಜ.17 : ವಿವಿಧ ಇಲಾಖೆಗಳು, ನಿಗಮ ಮಂಡಳಿಗಳು, ಸಹಕಾರ ಸಂಸ್ಥೆಗಳು, ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ 2508 ಬ್ಯಾಕ್‌ಲಾಗ್ ಹುದ್ದೆಗಳನ್ನು ಒಂದು ತಿಂಗಳೊಳಗೆ ನೇಮಕಾತಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ ಅವರು ತಿಳಿಸಿದರು.

ಬ್ಯಾಕ್ ಲಾಗ್ ಹುದ್ದೆಗಳ ನೇಮಕಾತಿ ಕುರಿತು ಇಂದು ಸಚಿವ ಸಂಪುಟ ಉಪ ಸಮಿತಿ ಸಭೆಯನ್ನು ನಡೆಸಿ, ಪ್ರಗತಿ ಪರಿಶೀಲನೆ ನಡೆಸಲಾಯಿತು. ಉನ್ನತ ಶಿಕ್ಷಣ ಇಲಾಖೆಯಲ್ಲಿ 882 ಹುದ್ದೆ, ಪ್ರಾಥಮಿಕ ಶಿಕ್ಷಣ ಇಲಾಖೆಯಲ್ಲಿ 432, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಲ್ಲಿ 346, ಲೋಕೋಪಯೋಗಿ ಇಲಾಖೆಯಲ್ಲಿ 184, ಸಾರಿಗೆ ಇಲಾಖೆಯಲ್ಲಿ 178, ಸಹಕಾರ ಇಲಾಖೆಯಲ್ಲಿ 132, ರೇಷ್ಮೆ ಇಲಾಖೆಯಲ್ಲಿ 120, ನಗರಾಭಿವೃದ್ಧಿ ಇಲಾಖೆಯಲ್ಲಿ 34, ತೋಟಗಾರಿಕೆ ಇಲಾಖೆಯಲ್ಲಿ 34, ಐಟಿಬಿಟಿಯಲ್ಲಿ 32, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 27, ಇಂಧನ ಇಲಾಖೆಯಲ್ಲಿ 25, ಅರಣ್ಯ ಇಲಾಖೆಯಲ್ಲಿ 23, ಕೃಷಿ ಇಲಾಖೆಯಲ್ಲಿ 20, ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ 18, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ 7,

ಗೃಹ ಇಲಾಖೆಯಲ್ಲಿ 5, ಪಶುಸಂಗೋಪನೆ ಇಲಾಖೆ, ಡಿಪಿಎಆರ್, ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ತಲಾ 2 ಹುದ್ದೆ ಹಾಗೂ ಹಣಕಾಸು ಇಲಾಖೆಯಲ್ಲಿ 1 ಹುದ್ದೆಯು ಬ್ಯಾಕ್ ಲಾಗ್ ಹುದ್ದೆಗಳಾಗಿವೆ.ಈ ಹುದ್ದೆಗಳನ್ನು ಒಂದು ತಿಂಗಳೊಳಗೆ ಭರ್ತಿ ಮಾಡಬೇಕು. ಅನುದಾನಿತ ಕಾಲೇಜುಗಳಲ್ಲಿರುವ ಬ್ಯಾಕ್ ಲಾಗ್ ಹುದ್ದೆಗಳನ್ನು 2 ತಿಂಗಳೊಳಗೆ ಭರ್ತಿ ಮಾಡಬೇಕು. ಅನುದಾನಿತ ಶಿಕ್ಷಣ ಸಂಸ್ಥೆಗಳು ಮುಂದಾಗದಿದ್ದರೆ ಸಮಾಜ ಕಲ್ಯಾಣ ಇಲಾಖೆಯಿಂದ ಭರ್ತಿ ಮಾಡಲಾಗುವುದು. ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಬ್ಯಾಕ್ ಲಾಗ್ ಹುದ್ದೆಗಳ ನೇಮಕಾತಿಗೆ 15 ದಿನಗಳೊಳಗೆ ಅನುಮತಿ ನೀಡಬೇಕು. ಲೋಕೋಪಯೋಗಿ ಇಲಾಖೆಯಲ್ಲಿರುವ ಬ್ಯಾಕ್ ಲಾಗ್ ಹುದ್ದೆಗಳು ಸಿ ಗುಂಪಿನ ತಾಂತ್ರಿಕೇತರ ಹುದ್ದೆಗಳಾಗಿರುವುದರಿಂದ ಇಲಾಖೆಯಿಂದಲೇ ಕೂಡಲೇ ಮೆರಿಟ್ ಆಧಾರದಡಿ ನೇಮಕಾತಿ ಪ್ರಕ್ರಿಯೆಗೆ ಕ್ರಮಕೈಗೊಳ್ಳಬೇಕು. ಬ್ಯಾಕ್ ಲಾಗ್ ಹುದ್ದೆಗಳ ಭರ್ತಿಗೆ ವಿಶೇಷ ನಿಯಮಾವಳಿ ರೂಪಿಸಲಾಗಿದೆ. ವಿನಾಯಿತಿಯನ್ನು ನೀಡಲಾಗಿದೆ. ಹಣಕಾಸು ಇಲಾಖೆಯ ಅನುಮತಿಯ ಅಗತ್ಯವೂ ಇಲ್ಲ. ಈ ಹುದ್ದೆಗಳ ನೇಮಕಾತಿಗೆ ಯಾವುದೇ ತಾಂತ್ರಿಕ ತೊಡಕು ಇರುವುದಿಲ್ಲ. ಕೂಡಲೇ ನೇಮಕಾತಿ ಅಧಿಸೂಚನೆ ಯನ್ನು ಹೊರಡಿಸಲು ಕ್ರಮಕೈಗೊಳ್ಳಬೇಕು. ಬ್ಯಾಕ್ ಲಾಗ್ ಹುದ್ದೆಗಳ ನೇಮಕಾತಿಗೆ ಯಾವುದೇ ತಾಂತ್ರಿಕ ಕಾರಣ ಹೇಳದೇ ಭರ್ತಿ ಮಾಡಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

## ಯುಕೆಪಿ ಯೋಜನೆ ಅನುಷ್ಟಾನಕ್ಕೆ ಬಜೆಟ್ ನಲ್ಲಿ ಪ್ರತ್ಯೇಕ ಅನುದಾನ ಮೀಸಲಿಡಲು ಮುಖ್ಯಮಂತ್ರಿಗಳೊಂದಿಗೆ ಸಭೆ : ಗೋವಿಂದ ಕಾರಜೋಳ

ಬೆಂಗಳೂರು. ಜ. 17 : ಕೃಷ್ಣ ಮೇಲ್ದಂಡೆ ಯೋಜನೆಯ ಭೂಸ್ವಾಧೀನತೆ, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕಾಮಗಾರಿಗಳಿಗೆ ಆಯವ್ಯಯದಲ್ಲಿ ಪ್ರತ್ಯೇಕ ಅನುದಾನವನ್ನು ಮೀಸಲಿಡಬೇಕಿದೆ. ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ಆಯೋಜಿಸಿ ಪ್ರತ್ಯೇಕ ಅನುದಾನವನ್ನು ಮೀಸಲಿಡುವಂತೆ ಮನವಿ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ತಿಳಿಸಿದರು.

ವಿಧಾನಸೌಧದಲ್ಲಿಂದು ಕೃಷ್ಣ ಮೇಲ್ದಂಡೆ ಯೋಜನೆಯ ಭೂಸ್ವಾಧೀನ, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕುರಿತ ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಕೃಷ್ಣ ಮೇಲ್ದಂಡೆ ಯೋಜನೆ ಹಂತ 3 ರ ಅನುಷ್ಟಾನಕ್ಕಾಗಿ ಹಂಚಿಕೆಯಾದ ನೀರಿನ ಪ್ರಮಾಣ 130 ಟಿಎಂಸಿ ಯಾಗಿದ್ದು, ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಆರ್. ಎಲ್. 519.60 ಮೀ. ನಿಂದ ಆರ್. ಎಲ್. 524.25 ಮೀ ಗೆ ಎತ್ತರಿಸುವುದು ಒಳಗೊಂಡಿರುತ್ತದೆ. ಈ ಯೋಜನೆಯಡಿ 9 ಉಪ ಯೋಜನೆಗಳಿದ್ದು, 13 ಮುಖ್ಯ ಸ್ತಾವರಗಳನ್ನು ನಿರ್ಮಿಸಲಾಗುವುದು. 7 ಜಿಲ್ಲೆಗಳಿಗೆ ಒಟ್ಟು 5.3 ಲಕ್ಷ ಹೆಕ್ಟರ್ ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಒದಗಿಸುವುದಾಗಿದೆ. 1,33,867 ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಬೇಕಿದೆ. ಸ್ವಾಧೀನಕ್ಕೊಳಪಡುವ ಜಮೀನಿಗೆ ನ್ಯಾಯಬದ್ದ ಮತ್ತು ಪಾರದರ್ಶಕ ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ 2013 ರನ್ವಯ ಭೂ ಪರಿಹಾರ ನೀಡಲಾಗುವುದು. 23,331 ಗ್ರಾಮೀಣ ಪ್ರದೇಶದ ಕಟ್ಟಡಗಳು ಹಾಗೂ 2,330 ನಗರ ಪ್ರದೇಶದ ಕಟ್ಟಡಗಳು ಬಾದಿತವಾಗಲಿವೆ. ಗ್ರಾಮೀಣ ಪ್ರದೇಶದ 1,17,669

ಕುಟುಂಬಗಳು ಹಾಗು 3,584 ನಗರ ಪ್ರದೇಶದ ಕುಟುಂಬಗಳು ಬಾದಿತಗೊಳ್ಳಲಿವೆ. ಈ ಯೋಜನೆಯ ಅನುಷ್ಠಾನಕ್ಕಾಗಿ 51,148 ಕೋಟಿ ರೂ. ಮೊತ್ತದ ಪರಿಷ್ಕೃತ ಯೋಜನಾ ವರದಿಯು ಅನುಮೋದಿತವಾಗಿದೆ. ಭೂ ಸ್ವಾಧೀನತೆ, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಹಾಗು ಬಿಟಿಡಿಎ ಗಾಗಿ 30,143 ಕೋಟಿ ರೂ. ಅನುಮೋದನೆ ಗೊಂಡಿದೆ. ಹಿನ್ನೀರನ್ನು ತಡೆಯಲು ತಡೆಗೋಡೆ ಕಟ್ಟಿದರೂ ಯಾವುದೇ ಪ್ರಯೋಜನವಾಗುವುದಿಲ್ಲ. ಇದರಿಂದ ಅನಾನುಕೂಲಗಳೇ ಹೆಚ್ಚಾಗುತ್ತವೆ. ಈ ಪ್ರಸ್ತಾವನೆಯನ್ನು ಕೈಬಿಟ್ಟು, ಬಾದಿತಗೊಳ್ಳುವ ಗ್ರಾಮಗಳ ಸ್ಥಳಾಂತ ಮಾಡಬೇಕು. ಮುಳುಗಡೆ ಜಮೀನನ್ನು ಲೀಜ್ ಪಡೆಯದೇ ಸ್ವಾಧೀನ ಪಡಿಸಿಕೊಂಡು ಪರಿಹಾರ ನೀಡಬೇಕು. ಅಧಿಸೂಚನೆ ಗೊಂಡ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವವರೆಗೆ ಆ ಜಮೀನಿನ ರೈತರಿಗೆ ಸಾಲಸೌಲಭ್ಯ, ಸರ್ಕಾರಿ ಸೌಲಭ್ಯಗಳು ದೊರಕುವಂತೆ ಕ್ರಮಕೈಗೊಳ್ಳಬೇಕು. ಭೂಸ್ವಾಧೀನ ಹಾಗು ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಯೋಜನೆಗೆ ಹೆಚ್ಚಿನ ಸಂಖ್ಯೆಯಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳನ್ನು ನಿಯೋಜಿಸಿ ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮಕೈಗೊಳ್ಳಬೇಕು. ಸಭೆಯಲ್ಲಿ ಶಾಸಕರಾದ ಶ್ರೀ ವೀರಣ್ಣ ಚರಂತಿ ಮಠ, ಶ್ರೀ ದೊಡ್ಡನಗೌಡ ಪಾಟೀಲ್ ಅವರು ಯೋಜನೆಯ ವ್ಯವಸ್ಥಿತ ಅನುಷ್ಠಾನ ಕುರಿತು ಚರ್ಚಿಸಿದರು. ನೀರಾವರಿ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ಶ್ರೀ ರಾಕೇಶ್ ಸಿಂಗ್, ಯುಕೆಪಿ ಯೋಜನೆಯ ಆಯುಕ್ತ ಶ್ರೀ ಜಯರಾಂ, ಯುಕೆಪಿಯ ಮಾಜಿ ಆಯುಕ್ತ ಹಾಗೂ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಶ್ರೀ ಶಿವಯೋಗಿ ಕಳಸದ, ಜಿಲ್ಲಾಧಿಕಾರಿ ಕ್ಯಾಪ್ಟನ್ ರಾಜೇಂದ್ರ ಮತ್ತಿತರರು ಹಾಜರಿದ್ದರು ಎಂದು ಪ್ರಕಟಣೆ ತಿಳಿಸಿದೆ.

## ಬಾಗಲಕೋಟೆ ನಗರ ಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೇಗೇರಿಸಲು ಕ್ರಮ : ಗೋವಿಂದ ಕಾರಜೋಳ

ಬೆಂಗಳೂರು. ಜ. 17: ಬಾಗಲಕೋಟೆ ನಗರ ಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದೆರ್ಜೆಗೇರಿಸಲು ಕ್ರಮಕೈಗೊಳ್ಳುವಂತೆ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರಿಗೆ ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ತಿಳಿಸಿದರು.

ವಿಧಾನ ಸೌಧದಲ್ಲಿಂದು ಬಾಗಲಕೋಟೆ ನಗರಾಭಿವೃದ್ಧಿ ಕುರಿತ ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಬಾಗಲಕೋಟೆ ನಗರ ಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವಂತೆ ಈಗಾಗಲೇ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಲಾಗಿದೆ. ಬಾಗಲಕೋಟೆ ನಗರವು ಹಿನ್ನೀರಿನಿಂದ ಮುಳುಗಡೆಯಾಗಿದ್ದು, ಜನತೆ ಸ್ಥಳಾಂತರಗೊಂಡಿದ್ದಾರೆ. ಅವರಿಗೆ ಹೆಚ್ಚಿನ ಮೂಲಭೂತ ಮೂಲಭೂತಸೌಕರ್ಯಗಳನ್ನು ಒದಗಿಸಲು ಅನುಕೂಲವಾಗುವಂತೆ ಈ ಪ್ರಸ್ತಾವನೆಯನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಮಂಜೂರು ಮಾಡಬೇಕು ಎಂದು ಅವರು ತಿಳಿಸಿದರು. ಬಾಗಲಕೋಟೆ ನಗರದಲ್ಲಿ 24*7 ಕುಡಿಯುವ ನೀರು ಪೂರೈಕೆಗೆ ಕ್ರಮಕೈಗೊಳ್ಳಬೇಕು. ಬಾಗಲಕೋಟೆ ಜಿಲ್ಲೆಯಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರು ಸಮರ್ಪಕ ಸರಬರಾಜಿಗೆ ಅನುಕೂಲವಾಗುವಂತೆ ಜಲಧಾರೆ ಯೋಜನೆಯನ್ನು ಜಾರಿಗೊಳಿಸಬೇಕು. ಈ ಯೋಜನೆಯ ಅನುಷ್ಠಾನಕ್ಕೆ ಒಂದು ನೆಟ್‌ವರ್ಕ್

ರೂಪಿಸಿ, ಎಲ್ಲಾ ಪ್ರದೇಶಗಳಿಗೆ ನೀರು ಪೂರೈಕೆ ಮಾಡಲಾಗುವುದು. ನಿರ್ವಹಣೆಯನ್ನು ಪ್ರತ್ಯೇಕ ನಿಗಮವು ಮಾಡಲಿದೆ. ಇದರಿಂದ ಸಮರ್ಪಕವಾಗಿ ನೀರು ಪೂರೈಕೆಯಾಗುವುದರ ಜೋತೆಗೆ ಮಿತವಾಗಿ ಬಳಕೆಗೆ ಅನುಕೂಲವಾಗುತ್ತದೆ ಎಂದು ಡಿಸಿಎಂ ತಿಳಿಸಿದ ಕೂಡಲೇ ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಶ್ರೀ ಅಂಜು ಪರವೇಜ್ ಅವರು ಬಾಗಲಕೋಟೆ ಜಿಲ್ಲೆಯು ಜಲಧಾರೆ ಯೋಜನೆಯ ಅನುಷ್ಠಾನಕ್ಕೆ ಸೂಕ್ತವಾಗಿದ್ದು, ಈ ಯೋಜನೆಯನ್ನು ಅನುಷ್ಠಾನಗೊಳಿಸುವುದಾಗಿ ಸಮ್ಮತಿ ಸೂಚಿಸಿದರು.

ಬಾಗಲಕೋಟೆ ನಗರ ಸಭೆ ಸೇರಿದಂತೆ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಕುಡಿಯುವ ನೀರು ಸರಬರಾಜು ಯೋಜನೆಗಳ ಪ್ರಸ್ತಾವನೆಗಳನ್ನು ಮಂಜೂರು ಮಾಡಬೇಕು. ಒಳಚರಂಡಿ ಕಾಮಗಾರಿಗಳ ಪ್ರಸ್ತಾವನೆಗಳನ್ನು ಸಕಾರಾತ್ಮಕವಾಗಿ ಪರಿಗಣಿಸಿ ಮಂಜೂರು ಮಾಡಬೇಕು ಎಂದು ಡಿಸಿಎಂ ತಿಳಿಸಿದರು.

ಸಭೆಯಲ್ಲಿ ಶಾಸಕರಾದ ಶ್ರೀ ವೀರಣ್ಣ ಚರಂತಿ ಮಠ, ಶ್ರೀ ದೊಡ್ಡನಗೌಡ ಪಾಟೀಲ್ ಅವರು ಕುಡಿಯುವ ನೀರು ಮತ್ತು ಒಳಚರಂಡಿ ಯೋಜನೆಗಳ ವ್ಯವಸ್ಥಿತ ಅನುಷ್ಠಾನ ಕುರಿತು ಚರ್ಚಿಸಿದರು. ಜಿಲ್ಲಾಧಿಕಾರಿ ಕ್ಯಾಪ್ಟನ್ ರಾಜೇಂದ್ರ, ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಜರಿದ್ದರು ಎಂದು ಪ್ರಕಟಣೆ ತಿಳಿಸಿದೆ.

## Operating extra buses for India v/s Australia Cricket Match

With reference to the subject cited above, 3rd Day & Night Cricket match will be held at Chinnaswamy Stadium on 19.01.2020 For the convenience of cricket fans BMTC is operating the extra busses to Chinnaswamy Stadium from different parts of the city.

In order to facilitate people to reach the stadium BMTC is operating buses from different part of the city from 11.00 to 13.00 pm, as mentioned below (People have to alight at bus stops nearest to Chinnaswamy stadium). Also, in order to facilitate people to reach their destination after the match BMTC is operating extra buses till 11:30 pm on ticket issue basis from chinnaswamy stadium as below.

| Route no: | From | To | Via |
|---|---|---|---|
| SBS-1K | **Chinnaswamy Cricket Stadium** | Kadugodi bus stand | Trinity circle, Domluru, HAL, Marathahalli |
| G-2 | | Sarjapura | Vivek Nagar, Koramangala, agara |
| G-3 | | Electronic city | Adugodi, Madiwala, Bommanahalli. |
| G-4 | | Bannerghatta national park | Adugodi, Jayadeva, Hulimavu Gate. |
| G-6 | | Kengeri, KHB Quarters | Mysuru Road, Nayandanahalli, Kengeri |
| G-7 | | Janapriya township | Magadi Road, Sunkad Katte, Gollarahatti |
| G-8 | | Nelamangala | Shivaji Nagara, Mekri Circle, Yashwanthpura. |
| G-9 | | Yelahanka 5th phase | Shivaji Nagar, Mekri Circle, Hebbal |
| G-10 | | Yelahanka | Shivaji Nagar, Tyanari Road, Nagawara |

| | | | |
|---|---|---|---|
| G-11 | | Bagalur | Shivaji Nagar, Lingarajapura, Hennur Cross |
| 317-G | | Hosakote | Halasuru, Tin Factory, K.R.Puram |

In addition to this, based on demand BMTC will operate the additional buses from major metro stations (ex: Baiyappanahalli, SV Metro Stn, Nayandahalli, Jalahalli Cross etc) to different parts of city on match days says official press release.

## ಜನವರಿ 19 ರಂದು ಕ್ರಿಕೆಟ್ ವೀಕ್ಷಣೆಗೆ ತೆರಳುವ ಸಾರ್ವಜನಿಕರ ಅನುಕೂಲಕ್ಕಾಗಿ ಚಿನ್ನಸ್ವಾಮಿ ಕ್ರೀಡಾಂಗಣದ ಮೂಲಕ ಹೆಚ್ಚಿನ ಬಸ್ಸುಗಳ ಓಡಾಟ

ಜನವರಿ 19 ರಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಭಾರತ ಹಾಗೂ ಆಸ್ಟ್ರೇಲಿಯಾ ತಂಡಗಳ ನಡುವೆ 3ನೇ ಏಕದಿನ (ಹಗಲು–ರಾತ್ರಿ) ಕ್ರಿಕೆಟ್ ಪಂದ್ಯಾವಳಿ ನಡೆಯಲಿದ್ದು, ವೀಕ್ಷಣೆಗೆ ಬಂದು ಹೋಗುವ ಪ್ರೇಕ್ಷಕರ ಅನುಕೂಲಕ್ಕಾಗಿ ಬೆಂ.ಮ.ಸಾ.ಸಂಸ್ಥೆಯ ವತಿಯಿಂದ ಹೆಚ್ಚುವರಿ ಬಸ್ಸುಗಳನ್ನು ಆಚರಣೆಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಕ್ರಿಕೆಟ್ ಪಂದ್ಯ ವೀಕ್ಷಣೆಗೆ ಬರುವ ಸಾರ್ವಜನಿಕರು ಕ್ರೀಡಾಂಗಣಕ್ಕೆ ಮಧ್ಯಾಹ್ನ 1 ಗಂಟೆಯವರೆಗೆ ತಲುಪಲು ಅನುಕೂಲವಾಗುವಂತೆ ಬೆಳಿಗ್ಗೆ 11.00 ಗಂಟೆಯ ನಂತರ ನಗರದ ವಿವಿಧ ಭಾಗಗಳಿಂದ ಈ ಕೆಳಕಂಡ ಮಾರ್ಗಗಳಲ್ಲಿ ಬಸ್ಸುಗಳನ್ನು ಆಚರಣೆಗೊಳಿಸಲಾಗುವುದು (ಪ್ರಯಾಣಿಕರು ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಹತ್ತಿರ ಇರುವ ನಿಲುಗಡೆಯಲ್ಲಿ ಇಳಿಯುವುದು) ಹಾಗೂ ಕ್ರಿಕೆಟ್ ಪಂದ್ಯ ಮುಗಿದ ನಂತರ ಚಿನ್ನಸ್ವಾಮಿ ಕ್ರೀಡಾಂಗಣದಿಂದ (ಸುಮಾರು ರಾತ್ರಿ 11:30 ಗಂಟೆಗೆ) ಮನೆಗೆ ತೆರಳಲು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ, ಪ್ರಯಾಣಿಕರ ಸಂಚಾರದ ಒತ್ತಡಕ್ಕನುಗುಣವಾಗಿ ಚಿನ್ನಸ್ವಾಮಿ ಕ್ರೀಡಾಂಗಣದಿಂದಲೇ, ಚೀಟಿ ವಿತರಣೆ ಆಧಾರದ ಮೇಲೆ ಹೆಚ್ಚುವರಿ ಬಸ್ಸುಗಳನ್ನು ಆಚರಣೆಗೊಳಿಸಲು ಕ್ರಮ ಕೈಗೊಳ್ಳಲಾಗಿದ್ದು, ಮಾರ್ಗದ ವಿವರಗಳು ಈ ಕೆಳಕಂಡಂತಿವೆ.

| **ಮಾರ್ಗ ಸಂಖ್ಯೆ** | **ಎಲ್ಲಿಂದ** | **ಎಲ್ಲಿಗೆ** | **ಮಾರ್ಗ** |
|---|---|---|---|
| SBS-1K | **ಚಿನ್ನಸ್ವಾಮಿ ಕ್ರಿಕೆಟ್ ಸ್ಟೇಡಿಯಂ** | ಕಾಡುಗೋಡಿ ಬಸ್ ನಿಲ್ದಾಣ | ಟ್ರಿನಿಟಿಸರ್ಕಲ್, ದೊಮ್ಮಲೂರು, ಹೆಚ್.ಎ.ಎಲ್, ಮಾರತ್ತಹಳ್ಳಿ, |
| G-2 | | ಸರ್ಜಾಪುರ | ವಿವೇಕ ನಗರ, ಕೋರಮಂಗಲ, ಅಗರ, |
| G-3 | | ಎಲೆಕ್ಟ್ರಾನಿಕ್ ಸಿಟಿ | ಆಡುಗೋಡಿ, ಮಡಿವಾಳ, ಬೊಮ್ಮನಹಳ್ಳಿ, |
| G-4 | | ಬನ್ನೇರುಘಟ್ಟ ನ್ಯಾಷನಲ್ ಪಾರ್ಕ್ | ಆಡುಗೋಡಿ, ಜಯದೇವ ಆಸ್ಪತ್ರೆ, ಹುಳಿಮಾವು ಗೇಟ್ |
| G-6 | | ಕೆಂಗೇರಿ ಕೆ.ಹೆಚ್.ಬಿ. ಕ್ವಾರ್ಟರ್ಸ್ | ಮೈಸೂರು ರಸ್ತೆ, ನಾಯಂಡಹಳ್ಳಿ, ಕೆಂಗೇರಿ |
| G-7 | | ಜನಪ್ರಿಯ ಟೌನ್‌ಶಿಪ್ | ಮಾಗಡಿ ರಸ್ತೆ , ಸುಂಕದ ಕಟ್ಟೆ, ಗೊಲ್ಲರಹಟ್ಟಿ |
| G-8 | | ನೆಲಮಂಗಲ | ಶಿವಾಜಿನಗರ, ಮೇಖ್ರಿ ಸರ್ಕಲ್, ಯಶವಂತಪುರ |
| G-9 | | ಯಲಹಂಕ 5ನೇ ಹಂತ | ಶಿವಾಜಿನಗರ, ಮೇಖ್ರಿ ಸರ್ಕಲ್, ಹೆಬ್ಬಾಳ, |
| G-10 | | ಯಲಹಂಕ | ಶಿವಾಜಿನಗರ, ಟ್ಯಾನರಿ ರಸ್ತೆ, ನಾಗವಾರ, ಆರ್.ಕೆ.ಹೆಗಡೆ ನಗರ |
| G-11 | | ಬಾಗಲೂರು | ಶಿವಾಜಿನಗರ, ಲಿಂಗರಾಜಪುರ, ಹೆಣ್ಣೂರು ಕ್ರಾಸ್ |
| 317G | | ಹೊಸಕೋಟೆ | ಟಿನ್ ಫ್ಯಾಕ್ಟರಿ, ಕೆ.ಆರ್.ಪುರ |

ಇದರೊಂದಿಗೆ ವಲಯವಾರು ಪ್ರಮುಖ ಮೆಟ್ರೋ ಜಂಕ್ಷನ್‌ಗಳಿಂದ (ಉದಾ: ಬೈಯ್ಯಪ್ಪನಹಳ್ಳಿ, ಎಸ್.ವಿ ಮೆಟ್ರೋ, ನಾಯಂಡಹಳ್ಳಿ, ಜಾಲಹಳ್ಳಿ ಕ್ರಾಸ್, ಇತ್ಯಾದಿ) ಸದರಿ ದಿನಗಳಂದು ಪ್ರಯಾಣಿಕರ ದಟ್ಟಣೆಗೆ ಅನುಗುಣವಾಗಿ ನಗರದ ವಿವಿಧ ಭಾಗಗಳಿಗೆ ಬೇಡಿಕೆಯನ್ವಯ ಹೆಚ್ಚುವರಿ ಬಸ್‌ಗಳನ್ನು ಆಚರಣೆಗೊಳಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು ಜನವರಿ 18 (ಕರ್ನಾಟಕ ವಾರ್ತೆ)

ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವ ವಿ. ಸೋಮಣ್ಣ ಅವರು ಜನವರಿ 19 ರಂದು ತುಮಕೂರು ಹಾಗೂ ಮಂಡ್ಯ ಜಿಲ್ಲೆಯಲ್ಲಿ ಪ್ರವಾಸಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

ಜನವರಿ 23 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

ಜನವರಿ 25 ಮತ್ತು 26 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸಕೈಗೊಳ್ಳುವರು.

## ಕಂದಾಯ ಸಚಿವರ ಪ್ರವಾಸ

ಬೆಂಗಳೂರು ಜನವರಿ 18 (ಕರ್ನಾಟಕ ವಾರ್ತೆ)

ಕಂದಾಯ ಮತ್ತು ಪೌರಾಡಳಿತ ಸಚಿವ ಆರ್. ಅಶೋಕ್ ಅವರು ಜನವರಿ 19 ರಂದು ದೇವನಹಳ್ಳಿಗೆ ಪ್ರವಾಸ ಕೈಗೊಂಡು ಅಂದೇ ಅಪರಾಹ್ನನಂತರ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.